# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಎಸ್.ಮೇಟಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಮುಂಡಗೋಡ, ಇವರನ್ನು ಸೇವೆಯಿಂದ ಅಮಾನತ್ತುಪಡಿಸುವ ಬಗ್ಗೆ.

**ಓದಲಾಗಿದೆ:-** 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡರವರ ಪತ್ರ ದಿನಾಂಕ:21.06.2013

****

**ಪ್ರಸ್ತಾವನೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ ಇವರು ಮೇಲೆ ಓದಲಾದ ಪತ್ರದಲ್ಲಿ ಶ್ರೀ ಎಂ.ಎಸ್.ಮೇಟಿ., ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಂಡಗೋಡ ಇವರು ದಿನಾಂಕ:18.06.2013ರಂದು ಬೆಳಗ್ಗಿನ ಜಾವ 1.15ಕ್ಕೆ ಹಿಂದುಳಿದ ವರ್ಗಗಳ, ಮಾಳಗಿ ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಪಾನಮತ್ತರಾಗಿ ಹೋಗಿ ವಿದ್ಯಾರ್ಥಿನಿಲಯದ ಬಾಗಿಲು ತೆರೆಯುವಂತೆ ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಬೆದರಿಕೆ ಹಾಗೂ ಅವ್ಯಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಸದರಿಯವರ ವಿರುದ್ಧ ಕಟ್ಟುನಿಟ್ಟಿನ ಶಿಸ್ತುಕ್ರಮ ಕೈಗೊಳ್ಳುವಂತೆ ಕೋರಿದ್ದಾರೆ.

ಮುಖ್ಯ ಕಾರ್ಯನಿರ್ವಾಹ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರಕನ್ನಡ ಇವರ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಶ್ರೀ ಎಂ.ಎಸ್.ಮೇಟಿ ಇವರು ಬೆಳಗ್ಗಿನ ಜಾವ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಪಾನಮತ್ತರಾಗಿ ಭೇಟಿ ನೀಡಿ ವಿದ್ಯಾರ್ಥಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ಬೆದರಿಕೆ ಹಾಕಿರುವುದು ಒಬ್ಬ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸುವ ಮೂಲಕ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಇವರ ವಿರುದ್ಧದ ಆರೋಪ ಕುರಿತಂತೆ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ಸೇವೆಯಿಂದ ಅಮಾನತ್ತು ಪಡಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 97 ವಿಸೇಬಿ 2013 ಬೆಂಗಳೂರು ದಿನಾಂಕ:04-09-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದಾಗಿ ಶ್ರೀ ಎಂ.ಎಸ್.ಮೇಟಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮುಂಡಗೋಡ ಇವರನ್ನು ಕರ್ನಾಟಕ ನಾಗರೀಕ ಸೇವಾ ವ.ನಿ.ಮೇ. ನಿಯಮಗಳು-1957ರ ನಿಯಮ 10(1)(ಡಿ)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅವರ ವಿರುದ್ಧ ಇಲಾಖಾ ವಿಚಾರಣೆ ಕಾಯ್ದಿರಿಸಿ, ಸೇವೆಯಿಂದ ಅಮಾನತ್ತುಪಡಿಸಿದೆ.

ಈ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಈ ಅಧಿಕಾರಿಯು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1) ಮಹಾಲೇಖಪಾಲರು(ಎ &ಇ), ಕರ್ನಾಟಕ, ಬೆಂಗಳೂರು
2) ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ, ಉತ್ತರ ಕನ್ನಡ

3) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಉತ್ತರ ಕನ್ನಡ.

4) ಶ್ರೀ ಎಂ.ಎಸ್.ಮೇಟಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಮುಂಡಗೋಡ.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು

2) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ (ಪಂ.ರಾಜ್)/ ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

3) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.